**Akashvani: Bangalore**
**Regional Bulletin In Kannada**
**26.04.2026: 14.30hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**26.04.2026: 14.30hrs**
*********

**ಮುಖ್ಯಾಂಶಗಳು :**

1. ದೇಶದ ಪವನಶಕ್ತಿ ಉತ್ಪಾದನಾ ಸಾಮರ್ಥ್ಯ ೫೬ ಗಿಗಾವ್ಯಾಟ್‌ಗಳಿಗೆ ಏರಿಕೆ
2. ಕರ್ನಾಟಕದ ಕರ್ಮ ವಿಹಾರ, ಪರಿಸರ ಪ್ರಜ್ಞೆಗೆ ಸಾಕ್ಷಿ; ಮನ್ ಕಿ ಬಾತ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ
3. ಕುಡಿಯುವ ನೀರಿನ ಅಭಾವ ನೀಗಿಸಲು 'ಗ್ರಾಮವಾರು ಟಾಸ್ಕ್ ಫೋರ್ಸ್' ರಚನೆ - ಸಚಿವ ಎಸ್.ಎಸ್.ಮಲ್ಲಿಕಾರ್ಜುನ
4. ಕಾರ್ಮಿಕರ ಕನಿಷ್ಠ ವೇತನ ಕಾಯಿದೆಗೆ ಶೀಘ್ರ ಅಂತಿಮ ರೂಪರೇಷೆ - ಕಾರ್ಮಿಕ ಸಚಿವ ಸಂತೋಷ್ ಲಾಡ್

*********

ಭಾರತದ ಅಭಿವೃದ್ಧಿಯಲ್ಲಿ ಪವನ ಶಕ್ತಿಯೇ ಹೊಸ ಗಾಥೆಯನ್ನು ಬರೆಯುತ್ತಿದೆ. ಇತ್ತೀಚೆಗೆ ಪವನ ಶಕ್ತಿಯಲ್ಲಿ ಪ್ರಮುಖ ಮೈಲಿಗಲ್ಲು ಸಾಧಿಸಿದೆ. ದೇಶದ ಪವನ ಶಕ್ತಿ ಉತ್ಪಾದನಾ ಸಾಮರ್ಥ್ಯವು ಈಗ ೫೬ ಗಿಗಾವ್ಯಾಟ್‌ಗಳನ್ನು ಮೀರಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ ಮನ್ ಕಿ ಬಾತ್‌ನ ೧೩೩ನೇ ಆವೃತ್ತಿಯಲ್ಲಿಂದು ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತು ಹಂಚಿಕೊಂಡಿರುವ ಅವರು, ಕಳೆದ ಒಂದು ವರ್ಷದಲ್ಲಿ ಸುಮಾರು ೬ ಗಿಗಾವ್ಯಾಟ್‌ಗಳಷ್ಟು ಪವನಶಕ್ತಿ ಸಾಮರ್ಥ್ಯವನ್ನು ಹೊಸದಾಗಿ ಸೇರಿಸಲಾಗಿದೆ. ಪವನ ಶಕ್ತಿಯಲ್ಲಿ ವೇಗವಾಗಿ ಪ್ರಗತಿ ಸಾಧಿಸುತ್ತಿದೆ ಮತ್ತು ಜಗತ್ತು ನಮ್ಮ ಕಡೆಗೆ ದೃಷ್ಟಿ ನೆಟ್ಟಿದೆ. ಇಂದು ಭಾರತ ಪವನ ಶಕ್ತಿ ಸಾಮರ್ಥ್ಯದಲ್ಲಿ ವಿಶ್ವದಲ್ಲಿ ನಾಲ್ಕನೇ ಸ್ಥಾನದಲ್ಲಿದೆ. ಇದು ಎಂಜಿನಿಯರ್‌ಗಳ ಕಠಿಣ ಪರಿಶ್ರಮ, ಯುವಕರ ಶ್ರದ್ಧೆ ಮತ್ತು ರಾಷ್ಟ್ರದ ಸಾಮೂಹಿಕ ಇಚ್ಛಾಶಕ್ತಿಯ ಸಂಕೇತವಾಗಿದೆ ಎಂದರು. ಗುಜರಾತ್, ತಮಿಳುನಾಡು, ಮಹಾರಾಷ್ಟ್ರ, ರಾಜಸ್ಥಾನ ಸೇರಿದಂತೆ ದೇಶದ ಹಲವು ರಾಜ್ಯಗಳು ಈ ವಲಯದಲ್ಲಿ ಸಾಧನೆಯನ್ನು ಮೆರೆದಿವೆ. ಹಿಂದೆ ಮರುಭೂಮಿಗಳು ಮಾತ್ರ ಗೋಚರಿಸುತ್ತಿದ್ದಂತಹ ಗುಜರಾತ್‌ನ ಕಚ್, ಪಠಾಣ್ ಮತ್ತು ಬನಾಸ್

ಕಾಂಠಾದಂತಹ ಪ್ರದೇಶಗಳು ಈಗ ದೊಡ್ಡ ನವೀಕರಿಸಬಹುದಾದ ಇಂಧನ ಉದ್ಯಾನವನಗಳಿಗೆ ನೆಲೆಯಾಗಿವೆ. ಯುವಕರು ಇದರಿಂದ ಪ್ರಯೋಜನ ಪಡೆಯುತ್ತಿದ್ದಾರೆ, ಹೊಸ ಅವಕಾಶಗಳನ್ನು ಸೃಷ್ಟಿಸಿ, ಹೊಸ ಕೌಶಲ್ಯಗಳನ್ನು ಅಭಿವೃದ್ಧಿಪಡಿಸುತ್ತಿದ್ದಾರೆ ಮತ್ತು ಇದರಿಂದಾಗಿ ಉದ್ಯೋಗಕ್ಕಾಗಿ ಹೊಸ ಮಾರ್ಗಗಳು ತೆರೆದುಕೊಳ್ಳುತ್ತಿವೆ ಎಂದು ಅವರು ವಿವರಿಸಿದರು. ಭಾರತದ ಅಭಿವೃದ್ಧಿಗೆ ಸೌರಶಕ್ತಿ ಮತ್ತು ಪವನ ಶಕ್ತಿ ಅತ್ಯಗತ್ಯವಾಗಿವೆ. ದೇಶವಾಸಿಗಳೆಲ್ಲರೂ ವಿದ್ಯುತ್ ಉಳಿತಾಯ ಮಾಡಬೇಕಿದೆ, ಶುದ್ಧ ಇಂಧನವನ್ನು ಅಳವಡಿಸಿಕೊಳ್ಳಬೇಕಿದೆ. ದೇಶದ ಪ್ರತಿಯೊಂದು ಹಂತದಲ್ಲೂ ಇಂತಹ ಪ್ರಯತ್ನಗಳು ಅವಶ್ಯಕವಾಗಿದೆ. ಏಕೆಂದರೆ ಈ ಕ್ರಮಗಳಿಂದಲೇ ದೊಡ್ಡ ಮಟ್ಟದ ಬದಲಾವಣೆಯನ್ನು ಕಾಣಬಹುದಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಸಲಹೆ ನೀಡಿದರು.

ಧ್ವನಿ : ಪ್ರಧಾನಿ

ದಕ್ಷಿಣ ಅಮೆರಿಕಾದ ಚಿಲಿಯಲ್ಲಿರುವ ಒಂದು ಸಂಸ್ಥೆ ಭಗವಾನ್ ಬುದ್ಧನ ಬೋಧನೆಗಳನ್ನು ಪ್ರಚಾರ ಮಾಡುತ್ತಿದೆ. ಲಡಾಖ್‌ನಲ್ಲಿ ಜನಿಸಿದ ಡ್ರುಬ್ಬನ್ ಓಟ್ಟರ್ ರಿನ್‌ಪೋಚೆ ಅವರ ಮಾರ್ಗದರ್ಶನದಲ್ಲಿ ಈ ಕಾರ್ಯ ಮುನ್ನಡೆಯುತ್ತಿದೆ. ಈ ಸಂಸ್ಥೆಯು ಜನರ ಜೀವನದಲ್ಲಿ ಧ್ಯಾನ ಮತ್ತು ಕರುಣೆ ಬೇರೆಯುವಂತೆ ಮಾಡುತ್ತಿದೆ. ಕೊಚಿಗುವಾಜ್ ಕಣಿವೆಯಲ್ಲಿರುವ ಸ್ತೂಪವು ಜನರ ಮನದಲ್ಲಿ ಶಾಂತಿಯ ಭಾವನೆಯನ್ನು ಮೂಡಿಸುತ್ತದೆ ಎಂದು ಹೇಳಿದರು. ಬೌದ್ಧ ಸಂಪ್ರದಾಯವು ನಮಗೆ ಪ್ರಕೃತಿಯೊಂದಿಗೆ ಸಂಪರ್ಕ ಹೊಂದುವುದನ್ನು ಕಲಿಸುತ್ತದೆ. ದೇಶಾದ್ಯಂತ ಇಂತಹ ಪ್ರಯತ್ನಗಳು ನಡೆಯುತ್ತಲೇ ಇವೆ. ಕರ್ನಾಟಕದಲ್ಲಿರುವ ಕರ್ಮ ವಿಹಾರವು ಒಂದು ಉತ್ತಮ ಉದಾಹರಣೆಯಾಗಿದೆ. ಈ ವಿಹಾರವು ೧೦೦ ಎಕರೆಗಳಷ್ಟು ವಿಸ್ತಾರವಾದ ರೋಮಾಂಚಕ ಅರಣ್ಯವಾಗಿದೆ. ಈ ಅರಣ್ಯದಲ್ಲಿ ೭೦೦ಕ್ಕೂ ಹೆಚ್ಚು ಸ್ಥಳೀಯ ಮರಗಳನ್ನು ಸಂರಕ್ಷಿಸಲಾಗಿದೆ ಎಂದು ಅವರು ವಿವರಿಸಿದರು.

ಧ್ವನಿ : ಪ್ರಧಾನಿ

ಬುದ್ಧನ ಸಂದೇಶವು ಕೇವಲ ಭೂತಕಾಲಕ್ಕೆ ಸೀಮಿತವಾಗಿಲ್ಲ. ಅದು ಇಂದಿಗೂ ಪ್ರಸ್ತುತ ಮತ್ತು ಭವಿಷ್ಯಕ್ಕೆ ಕೂಡಾ ಅವಶ್ಯಕವಾಗಿದೆ. ಬುದ್ಧ ಪೂರ್ಣಿಮೆಯ ಈ ಸಂದರ್ಭವು ಸ್ಫೂರ್ತಿದಾಯಕವಾಗಿದೆ ಎಂದರು. ಛತ್ತೀಸ್‌ಗಢದಲ್ಲಿ ಕೃಷ್ಣಮೃಗಗಳು ಮತ್ತೆ ಕಾಣಿಸಿಕೊಳ್ಳುತ್ತಿವೆ. ಅವುಗಳ ಸಂಖ್ಯೆ ಗಮನಾರ್ಹವಾಗಿ ಕಡಿಮೆಯಾಗಿತ್ತು. ಆದರೆ ನಿರಂತರ ಪ್ರಯತ್ನಗಳು ಸಂರಕ್ಷಣಾ ಕ್ರಮಗಳನ್ನು ಹೆಚ್ಚಿಸಲಾಗಿದೆ. ಇದು ಕಳೆಗುಂದುತ್ತಿದ್ದ ಪರಂಪರೆಯ ಪುನಃಸ್ಥಾಪನೆಯನ್ನು

ಸೂಚಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು. ಗೋದಾವನ್ ಎಂದು ಕರೆಯಲಾಗುವ ಗ್ರೇಟ್ ಇಂಡಿಯನ್ ಪಕ್ಷಿಯ ಸಂರಕ್ಷಣೆಯಲ್ಲಿ ಇದೇ ರೀತಿಯ ಭರವಸೆ ಗೋಚರಿಸುತ್ತಿದೆ. ಈ ಪಕ್ಷಿ ಮರುಭೂಮಿ ಪ್ರದೇಶಗಳ ವಿಶಿಷ್ಟ ಆಕರ್ಷಣೆಯಾಗಿತ್ತು. ಆದಾಗ್ಯೂ, ಅದರ ಸಂಖ್ಯೆ ಗಮನಾರ್ಹವಾಗಿ ಕಡಿಮೆಯಾಗಿತ್ತು. ಅದು ಅಳಿವಿನ ಅಂಚಿಗೆ ಸಾಗಿತ್ತು. ಆದರೆ ಈಗ ಅದರ ಸಂರಕ್ಷಣೆಗಾಗಿ ಒಂದು ಪ್ರಮುಖ ಅಭಿಯಾನ ನಡೆಯುತ್ತಿದೆ. ವೈಜ್ಞಾನಿಕ ವಿಧಾನಗಳನ್ನು ಅಳವಡಿಸಿಕೊಳ್ಳಲಾಗುತ್ತಿದೆ. ಸಂತಾನೋತ್ಪತ್ತಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಮತ್ತು ಈಗ ಇವುಗಳ ಸಂಖ್ಯೆಯಲ್ಲಿ ಹೆಚ್ಚಳವಾಗುತ್ತಿರುವುದು ಕಂಡುಬರುತ್ತಿದೆ ಎಂದು ಅವರು ಮಾಹಿತಿ ನೀಡಿದರು. ಈ ತಿಂಗಳಾರಂಭದಲ್ಲಿ ಫ್ರಾನ್ಸ್‌ನ ಬೋರದೋ European Girls Mathematical Olympiad ಆಯೋಜಿಸಲಾಗಿತ್ತು. ಗಣಿತದಲ್ಲಿ ಅತ್ಯಂತ ಆಸಕ್ತಿ ಹೊಂದಿರುವ ಶಾಲಾ ವಿದ್ಯಾರ್ಥಿಗಳಿಗಾಗಿ ಇದೊಂದು ಅತ್ಯಂತ ದೊಡ್ಡ ಸ್ಪರ್ಧೆಯಾಗಿತ್ತು. ಇದು ವಿಶ್ವದ ಅತ್ಯಂತ ಪ್ರತಿಷ್ಠಿತ ಸ್ಪರ್ಧೆಗಳಲ್ಲಿ ಒಂದೆನಿಸಿದೆ. ಈ Olympiad ನಲ್ಲಿ ಭಾರತದ ಹೆಣ್ಣು ಮಕ್ಕಳು ಈವರೆಗೆ ಅತ್ಯಂತ ಉತ್ತಮ ಪ್ರದರ್ಶನ ನೀಡಿದ್ದಾರೆ ಎಂದು ಪ್ರಧಾನಿ ಶ್ಲಾಘಿಸಿದರು. ಇದರಲ್ಲಿ ಮುಂಬಯಿನ ಶ್ರೇಯಾ ಮುಂಧ್ರಾ, ತಿರುವನಂತಪುರಂನ ಸಂಜನಾ ಚಾಕೋ, ಚೆನ್ನೈನ ಶಿವಾನಿ ಭರತ್ ಕುಮಾರ್ ಮತ್ತು ಕೊಲ್ಕತ್ತಾದ ಶ್ರಿಮೋಯಿ ಬೇರಾ ಸೇರಿದ್ದಾರೆ. ಈ ತಂಡ ವಿಶ್ವದಲ್ಲಿ ಆರನೇ ಸ್ಥಾನ ಪಡೆದುಕೊಂಡಿತು. ಶ್ರೇಯಾ ಚಿನ್ನದ ಪದಕ ಗೆಲ್ಲುವ ಮೂಲಕ ಇತಿಹಾಸ ನಿರ್ಮಿಸಿದ್ದು, ಸಂಜನಾ ಬೆಳ್ಳಿ ಪದಕ ಹಾಗೂ ಶಿವಾನಿ ಕಂಚಿನ ಪದಕ ತಮ್ಮದಾಗಿಸಿಕೊಂಡರು ಎಂದು ಅವರು ತಿಳಿಸಿದರು. Olympiad ಗಾಗಿ ಭಾರತದಲ್ಲಿ ನಡೆದ ಆಯ್ಕೆ ಪ್ರಕ್ರಿಯೆ ಬಹಳ ಕಠಿಣವಾಗಿತ್ತು. ಇದಕ್ಕಾಗಿ ಒಂದು ಬಹು-ಹಂತ ಆಯ್ಕೆ ಪ್ರಕ್ರಿಯೆಯಿದೆ. ಅತ್ಯುತ್ತಮ ಪ್ರದರ್ಶನ ನೀಡುವ ವಿದ್ಯಾರ್ಥಿಗಳು ಟಾಟಾ ಇನ್‌ಸ್ಟಿಟ್ಯೂಟ್ ಆಫ್ ಫಂಡಮೆಂಟಲ್ ರಿಸರ್ಚ್ ನ ಹೋಮಿ ಬಾಬಾ ಸೆಂಟರ್ ಫಾರ್ ಸೈನ್ಸ್ ಎಜುಕೇಶನ್ ನಲ್ಲಿ ನಡೆಯುವ ಒಂದು ತಿಂಗಳ ಕಾಲದ ಗಣಿತ ತರಬೇತಿ ಶಿಬಿರದಲ್ಲಿ ಭಾಗವಹಿಸುತ್ತಾರೆ. ಈ ಶಿಬಿರದ ಮುಕ್ತಾಯದಲ್ಲಿ ತಂಡದ ಆಯ್ಕೆ ಪರೀಕ್ಷೆ ಇರುತ್ತದೆ. ಇದರಲ್ಲಿ ನೀಡುವ ಪ್ರದರ್ಶನದ ಆಧಾರದಲ್ಲಿ ಭಾರತದ ತಂಡವನ್ನು ಆಯ್ಕೆ ಮಾಡಲಾಗುತ್ತದೆ. ಪ್ರತಿ ವರ್ಷ ದೇಶಾದ್ಯಂತ ಸುಮಾರು ೭ ಲಕ್ಷ ವಿದ್ಯಾರ್ಥಿಗಳು ಈ Mathematical Olympiad Program ನಲ್ಲಿ ಪಾಲ್ಗೊಳ್ಳುತ್ತಾರೆ ಎಂದು ಪ್ರಧಾನಿ ನರೇಂದ್ರ ಮೋದಿ ವಿವರಿಸಿದರು.

***********

ದಾವಣಗೆರೆ ಜಿಲ್ಲೆಯ ಗ್ರಾಮೀಣ ಭಾಗದಲ್ಲಿ ತಲೆದೋರಿರುವ ಕುಡಿಯುವ ನೀರಿನ ಸಮಸ್ಯೆಯನ್ನು ಯುದ್ಧೋಪಾದಿಯಲ್ಲಿ ಬಗೆಹರಿಸಲು 'ಗ್ರಾಮವಾರು ಟಾಸ್ಕ್ ಫೋರ್ಸ್' ಸಮಿತಿಗಳನ್ನು ರಚಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಸೂಚಿಸಿದ್ದಾರೆ. ನಗರದ ಗೃಹ ಕಚೇರಿಯಲ್ಲಿ ಸಾರ್ವಜನಿಕರ ಕುಂದು-ಕೊರತೆ ಆಲಿಸಿದ ಅವರು, ನೀರಿನ ವಿಚಾರದಲ್ಲಿ ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸುವುದಾಗಿ ಎಚ್ಚರಿಕೆ ನೀಡಿದರು. ಅಧಿಕಾರಿಗಳು ಹಳ್ಳಿಗಳಿಗೆ ಭೇಟಿ ನೀಡಿ ಸ್ಥಳದಲ್ಲೇ ಸಮಸ್ಯೆ ಬಗೆಹರಿಸಬೇಕು. ಪ್ರತಿ ತಾಲೂಕಿಗೆ ಒಬ್ಬ ನೋಡಲ್ ಅಧಿಕಾರಿಯನ್ನು ನೇಮಕ ಮಾಡಬೇಕು. ಪ್ರತಿದಿನ ಬೆಳಗ್ಗೆ ೧೦ ಗಂಟೆಯೊಳಗೆ ಗ್ರಾಮವಾರು ನೀರಿನ ಸ್ಥಿತಿಗತಿಯ ವರದಿಯನ್ನು ಕಡ್ಡಾಯವಾಗಿ ಸಲ್ಲಿಸಬೇಕು. ನೀರಿನ ತೀವ್ರ ಅಭಾವವಿರುವ ಕಡೆಗಳಲ್ಲಿ ತಕ್ಷಣವೇ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲು ವ್ಯವಸ್ಥೆ ಮಾಡಿಕೊಳ್ಳಬೇಕು ಎಂದು ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಅಧಿಕಾರಿಗಳಿಗೆ ಸೂಚಿಸಿದರು.

***********

ಬಳ್ಳಾರಿ ಜಿಲ್ಲೆ ಸಂಡೂರು ತಾಲೂಕಿನ ತಾಳೂರು ಗ್ರಾಮದಲ್ಲಿ ಸಮರ್ಪಣಾ ಸಮಾವೇಶ ನಡೆಯಿತು. ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ಹಾಗೂ ಹಕ್ಕು ಪತ್ರ ವಿತರಣೆ ಮತ್ತು ರಸ್ತೆ, ಚರಂಡಿ, ಶಿಕ್ಷಣ, ಆರೋಗ್ಯ ಸೇರಿದಂತೆ ಇನ್ನಿತರ ಅಭಿವೃದ್ಧಿ ಕಾಮಗಾರಿಗೆ  ಕಾರ್ಮಿಕ ಸಚಿವ ಸಂತೋಷ್ ಲಾಡ್ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು, ಗಿಗ್ ಕಾರ್ಮಿಕರಿಗೆ ಕಾರ್ಮಿಕ ಇಲಾಖೆಯಿಂದ ಸ್ಮಾರ್ಟ್  ಕಾರ್ಡ್ ನೀಡಲಾಗಿದೆ. ಕಾರ್ಮಿಕರ ಕನಿಷ್ಠ ವೇತನ ಕಾಯಿದೆಯನ್ನು ಇನ್ನೊಂದು ವಾರದಲ್ಲಿ ಚರ್ಚಿಸಿ, ಅಂತಿಮಗೊಳಿಸಲಾಗುವುದು ಎಂದು ತಿಳಿಸಿದರು. ಸಂಸದ ತುಕಾರಾಂ ಮಾತನಾಡಿ, ತುಂಗಭದ್ರಾ ಜಲಾಶಯದಿಂದ ಸಂಡೂರು ತಾಲೂಕಿನ ೭೮ ಹಳ್ಳಿಗಳಿಗೆ ಕುಡಿಯುವ ನೀರು ಸರಬರಾಜು ಯೋಜನೆ ಅನುಷ್ಠಾನಕ್ಕೆ ತರಲಾಗಿದೆ ಎಂದು ಹೇಳಿದರು.

***********

ಪ್ರಜಾಪ್ರಭುತ್ವದಲ್ಲಿ ಯುವಜನರ ಭಾಗವಹಿಸುವಿಕೆಯನ್ನು ಉತ್ತೇಜಿಸುವ ಉಪಕ್ರಮವಾಗಿ, ಉತ್ತರ ಕನ್ನಡದ ಮೈ ಭಾರತ್ ಕೇಂದ್ರವು ಅಂಕೋಲಾದ ಶೆಟಗೇರಿ ಗ್ರಾಮ ಪಂಚಾಯತ್‌ನ ಪೂಜಗೆರೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಾದರಿ ಯುವ ಗ್ರಾಮ ಸಭೆ ಆಯೋಜಿಸಿತ್ತು. ಮಾದರಿ ಯುವ ಗ್ರಾಮ ಸಭೆಯು ಯುವ ನಾಗರಿಕರಿಗೆ ಪಂಚಾಯತ್ ರಾಜ್ ಸಂಸ್ಥೆಗಳ ಕಾರ್ಯವೈಖರಿಯ ಬಗ್ಗೆ ಶಿಕ್ಷಣ ನೀಡುವುದು ಮತ್ತು ಸಕ್ರಿಯ ನಾಗರಿಕ ತೊಡಗಿಸಿಕೊಳ್ಳುವಿಕೆಯನ್ನು ಪ್ರೋತ್ಸಾಹಿಸುವ

ಗುರಿಯನ್ನು ಹೊಂದಿದೆ. ಅಣಕು ಗ್ರಾಮ ಸಭೆಯಲ್ಲಿ ಒಟ್ಟು ೬೪ ಯುವಕರು ಸಕ್ರಿಯವಾಗಿ ಭಾಗವಹಿಸಿದ್ದರು.

***********

ಹಿಂದಿ ಭಾಷೆಯು ಭಾರತ ದೇಶದ ಸಂಸ್ಕೃತಿ, ಸಾಮಾಜಿಕ ಪ್ರಜ್ಞೆ ಮತ್ತು ಸಂಪರ್ಕ ಭಾಷೆಯಾಗಿದೆ. ಹಿಂದಿ ಕಲಿಯುವುದರಿಂದ ಹೆಚ್ಚಿನ ಉದ್ಯೋಗಾವಕಾಶಗಳು ಲಭಿಸುತ್ತವೆ ಎಂದು ನವದೆಹಲಿಯ ಕೇಂದ್ರೀಯ ಹಿಂದಿ ನಿರ್ದೇಶನಾಲಯದ ಸಹಾಯಕ ನಿರ್ದೇಶಕರಾದ ಡಾ.ನೂತನ್ ಪಾಂಡೆ ಅಭಿಪ್ರಾಯಪಟ್ಟಿದ್ದಾರೆ. ಮಂಡ್ಯ ನಗರದ ಹಿಂದಿ ಭವನದಲ್ಲಿ ಕೇಂದ್ರೀಯ ಹಿಂದಿ ನಿರ್ದೇಶನಾಲಯ, ಕರ್ನಾಟಕ ಹಿಂದಿ ಸಭಾ ಸಹಯೋಗದಲ್ಲಿ ಹಿಂದಿ ನವಲೇಖಕ ಶಿಬಿರದ ಸಮಾರೋಪ ಸಮಾರಂಭ ಉದ್ದೇಶಿಸಿ ಮಾತನಾಡಿದ ಅವರು, ಕೇಂದ್ರೀಯ ಹಿಂದಿ ನಿರ್ದೇಶನಾಲಯವು ಕೇವಲ ಹಿಂದಿ ಭಾಷೆಯಲ್ಲದೆ, ಭಾರತೀಯ ಭಾಷೆಗಳ ವಿಕಾಸ ಮತ್ತು ಪ್ರಾಮುಖ್ಯತೆಯ ಕಡೆಗೆ ವಿಶ್ವಾಸವಿಡುವಂತೆ ಮಾಡಿದೆ ಎಂದರು.

*****END******